B.Pharm. 40 → 60

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯಃ ಕೆ.ಎಲ್.ಇ. ಕಾಲೇಜ್ ಆಫ್ ಫಾರ್ಮಸಿ, ನಿಪ್ಪಾಣಿ, ಇಲ್ಲಿ ಬಿ-ಫಾರ್ಮ ಕೋರ್ಸಿನ ಪ್ರವೇಶ ಮಿತಿ ಹೆಚ್ಚಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆಃ 1) ರಿಜಿಸ್ಟ್ರಾರ್, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆಃ ಎಸಿವಿ ಃಎಫ್:ಪಿಹೆಚ್- 54/O-10/2005-2006, ದಿನಾಂಕಃ 14.06.2005.

**ಪ್ರಸ್ತಾವನೆಃ**

ರಿಜಿಸ್ಟ್ರಾರ್, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4 ನೇ ಟ ಬ್ಲಾಕ್, ಜಯನಗರ, ಬೆಂಗಳೂರು ಇವರು ಮೇಲೆ ಓದಲಾದ ಕ್ರಮ ಸಂಖ್ಯೆಃ (1) ರಲ್ಲಿನ ಪತ್ರದಲ್ಲಿ ಕೆ.ಎಲ್.ಇ. ಕಾಲೇಜ್ ಆಫ್ ಫಾರ್ಮಸಿ, ನಿಪ್ಪಾಣಿ, ಇಲ್ಲಿ ಬಿ-ಫಾರ್ಮ ಕೋರ್ಸಿನ ಪ್ರವೇಶ ಮಿತಿ ಹೆಚ್ಚಿಸುವ ಕುರಿತು ಸ್ಥಳೀಯ ವಿಚಾರಣಾ ಸಮಿತಿ, ಶೈಕ್ಷಣಿಕ ಪರಿಷತ್ ಹಾಗೂ ಸಿಂಡಿಕೇಟ್ ತೆಗೆದುಕೊಂಡ ನಿರ್ಣಯದ ಪ್ರತಿಗಳನ್ನು ಮುಂದಿನ ಕ್ರಮಕ್ಕಾಗಿ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆಃಆಕುಕ 338 ಪಿಟಿಡಿ 2005, ಬೆಂಗಳೂರು, ದಿನಾಂಕಃ 07.09.2006.**

1994ರ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮದ 45(5) ನೇ ಪ್ರಕರಣದಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕೆ.ಎಲ್.ಇ. ಕಾಲೇಜ್ ಆಫ್ ಫಾರ್ಮಸಿ, ನಿಪ್ಪಾಣಿ, ಇಲ್ಲಿ 2005-2006 ನೇ ಶೈಕ್ಷಣಿಕ ಸಾಲಿನಿಂದ ಬೀ-ಫಾರ್ಮ ಕೋರ್ಸಿನ ಪ್ರವೇಶ ಮಿತಿಯನ್ನು 40 (ನಲವತ್ತು) ರಿಂದ 60 (ಅರವತ್ತು) ಕ್ಕೆ ಹೆಚ್ಚಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮತಿ ನೀಡಲಾಗಿದೆ ಹಾಗೂ ಸಂಯೋಜನೆ ನೀಡಲು ಶಿಫಾರಸ್ಸು ಮಾಡಲಾಗಿದೆ.

1) ಸಂಯೋಜನೆಯ ಬಗ್ಗೆ ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತಿನ ಅನುಮತಿ ಪಡೆಯತಕ್ಕದ್ದು.
2) ಸಂಯೋಜನೆಯ ಬಗ್ಗೆ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅನುಮತಿ ಪಡೆಯತಕ್ಕದ್ದು.
3) ಸರ್ಕಾರದ ಸೀಟುಗಳ ಹಂಚಿಕೆಯಲ್ಲಿ ಪ್ರವೇಶಾವಕಾಶಕ್ಕೆ ಹಾಲಿ ಜಾರಿಯಲ್ಲಿರುವ ನಿಯಮಗಳಿಗೆ ಸಂಸ್ಥೆಯು ಬದ್ಧವಾಗಿರಬೇಕು.

--2

4) ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ : ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತ್ ನಿಗದಿಪಡಿಸಿರುವ ಪರಿನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

5) ರಾಜ್ಯ ಸರ್ಕಾರವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಪಾಲಿಸತಕ್ಕದ್ದು.

6) ಈ ಕಾಲೇಜುಗಳಿಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಷರತ್ತಿಗೆ ಒಳಪಟ್ಟಿರುತ್ತದೆ.

7) ಸರ್ಕಾರದ ಮೇಲ್ಕಂಡ ಯಾವುದೇ ಒಂದು ಷರತ್ತನ್ನು ಉಲ್ಲಂಘಿಸಿದ್ದಲ್ಲಿ, ಸಂಯೋಜನೆ/ಮಂಜೂರಾತಿಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

07/9/06

(ಎಸ್.ಎನ್.ಕೃಷ್ಣಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.

**ಇವರಿಗೆ:**

1) ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4 ನೇ ಟಿ ಬ್ಲಾಕ್, ಜಯನಗರ, ಬೆಂಗಳೂರು- 41.
2) ನಿರ್ದೇಶಕರು, ವೈದ್ಯಕೀಯ ಶಿಕ್ಷಣ, ಆನಂದರಾವ್ ವೃತ್ತ, ಬೆಂಗಳೂರು- 560 009.
3) ಪ್ರಾಂಶುಪಾಲರು, ಕೆ.ಎಲ್.ಇ. ಕಾಲೇಜ್ ಆಫ್ ಫಾರ್ಮಸಿ, ಅಂಚೆ ಪೆಟ್ಟಿಗೆ ಸಂಖ್ಯೆ 54, ಜಿ.ಐ.ಬಾಗೇವಾಡಿ ಕಾಲೇಜ್ ಕ್ಯಾಂಪಸ್, ನಿಪ್ಪಾಣಿ-591237.
4) ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ (ವೈದ್ಯಕೀಯ ಶಿಕ್ಷಣ), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
5) ಸರ್ಕಾರದಜಂಟಿಕಾರ್ಯದರ್ಶಿಯವರ ಆಪ್ತ ಸಹಾಯಕರು (ವೈದ್ಯಕೀಯ ಶಿಕ್ಷಣ), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
6) ಶಾಖೆಯ ರಕ್ಷಾ ಕಡತ : ಹೆಚ್ಚುವರಿ ಪ್ರತಿಗಳು.

K.L.E. Society's
College of Pharmacy, Nipani.
Inwards No 484/74
Date . 14/9/06